ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **324/2020**

| | | |
|---|---|---|
| ಸಾಕ್ಷಿಯ ಹೆಸರುಃ | ಸೈಯದ ಅಲಿ | ಪ್ರಾಸಾಃ 3 |
| ತಂದೆ/ಗಂಡನ ಹೆಸರುಃ | ಅಬ್ದುಲ್ ಖಾದರ | ಚಾಸಾಃ 4 |
| ವಯಸ್ಸು ಃ | 45 ವರ್ಷ | ದಿಃ 07-03-2026 |
| ಉದ್ಯೋಗಃ | ಮುಖ್ಯ ಪೇದೆ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಯಾದಗಿರಿ. | |

<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>

ನಾನು 2019 ರಿಂದ 2021 ರವರೆಗೆ ಸೈದಾಪೂರ ಪೋಲಿಸ ಠಾಣೆಯಲ್ಲಿ ನಾನು ಮುಖ ಪೇದೆ ಎಂದು ಕರ್ತವ್ಯವನ್ನು ನಿರ್ವಹಿಸಿರುತ್ತೇನೆ.

ದಿನಾಂಕ 26-03-2020 ರಂದು ನಾನು ಠಾಣೆಯಲ್ಲಿದ್ದಾಗ, ಚಾಸಾಃ 1 ರವರು ನನಗೆ ಚಾಸಾಃ 5 ರಿಂದ 7 ರವರಿಗೆ ಕರೆಯಿಸಿ, ಪಂಚರನ್ನು ಕರೆಯಿಸಿ ಯಲಸತ್ತಿ ಗ್ರಾಮದಲ್ಲಿ ಸಾರ್ವಜನಿಕ ಸ್ಥಳದಲ್ಲಿ ಬಸ್ ಸ್ಟ್ಯಾಂಡ ಹತ್ತಿರ ಮದ್ಯ ಮಾರಾಟ ಮಾಡುತ್ತಿದ್ದಾನೆ ಎಂದು ಖಚಿತ ಭಾತ್ಮಿ ಬಂದ ಮೆರೆಗೆ, ಎಲ್ಲರೂ ಸರಕಾರಿ ವಾಹನ ಮೂಲಕ ಯಲಸತ್ತಿ ಗ್ರಾಮದ ಸಮೀಪ ಹೋಗಿ ಎಲ್ಲರೂ ನಡೆದುಕೊಂಡು ಹೋಗಿ ಮರೆಯಾಗಿ ನಿಂತು ನೋಡಿದಾಗ ಒಬ್ಬ ವ್ಯಕ್ತಿ ಮದ್ಯ ಮಾರಾಟ ಮಾಡುವುದನ್ನು ಕಂಡು ದಾಳಿ ಮಾಡಿದಾಗ ಆರೋಪಿತನು ಓಡಿ ಹೋಗಿರುತ್ತಾನೆ. ಸ್ಥಳದಲ್ಲಿ 4 ಕಿಂಗಿ ಫಿಷರ 650 ಎಮ್, ಎಲ್ ಮತ್ತು 6 ಕಿಂಗ್ ಫೀಷರ 330 ಎಮ್. ಎಲ್ ಇರುತ್ತದೆ. ಅಂದಾಜು ಕಿಮ್ಮತ್ತು 1,020/- ರೂ. ಪಂಚರ ಸಮಕ್ಷಮದಲ್ಲಿ 6.00 ಗಂಟೆಯಿಂದ 7.00 ಗಂಟೆಯವರೆಗೆ ಪಂಚನಾಮೆಯನ್ನು ಜರುಗಿಸಿ ಸ್ಯಾಂಪ ತೆಗೆದುಕೊಂಡು ತಜ್ಞರ ವರದಿಗಾಗಿ ಕಳುಹಿಸಿರುತ್ತೇವೆ. ನಂತರ ವ್ಯಕ್ತಿಯ ಹೆಸರು ಭೀಮಶಂಕರ ತಂದೆ ಸವರಪ್ಪ ಎಂದು ತಿಳಿದು ಬಂದಿರುತ್ತದೆ. ನಾನು ಪೊಲಿಸರ ಮುಂದೆ ಹೇಳಿಕೆ ನೀಡಿರುತ್ತೇನೆ. ಮು. ಮಾ. ಪಂಚನಾಮೆಯನು ಚಾಸಾಃ 9 ರವರಿಗೆ ನೀಡಿರುತ್ತೇನೆ. ಆರೋಪಿ ಮತ್ತು ಮು. ಮಾ. ನ್ನು ನೋಡಿ ಸಾಕ್ಷಿಯು ಗುರುತಿಸಿರುತ್ತಾರೆ.

<u>ಪಾಟಿ ಸವಾಲುಃ ಆರೋಪಿ ಪರ ಶ್ರೀ ಎನ್. ಎಮ್. ಜಿ. ವಕೀಲರಿಂದ.</u>

1. ಭಾತ್ಮಿ ಬಂದಾಗ ನಾನು ಠಾಣೆಯಲ್ಲಿದ್ದೆ. ಚಾಸಾಃ 1 ರವರು ಪಂಚರನ್ನು ಕರೆಸಿರುತ್ತಾರೆ. ಸದರಿ ಭಾತ್ಮಿ ಬಂದಾಗ ನಮಗೆ ಮುಂಚೆ ಹೇಳಿರುತ್ತಾರೆ. ಠಾಣೆಯಿಂದ 5.15 ಕ್ಕೆ ಹೋಗಿರುತ್ತೇವೆ. ಸದರಿ 50 ಮೀಟರ ದೂರದಿಂದ ಮರೆಯಾಗಿ ನಿಂತು ನೋಡಿರುತ್ತೇವೆ. ಸದರಿ ಗ್ರಾಹಕರು ಇರುವುದರಿಂದ ದೂರದಿಂದ ಮಾರಾಟ ಮಾಡಿದರೂ ಕೂಡ ಗೊತ್ತಾಗುತ್ತದೆ. 4-5 ಜನರು ಗ್ರಾಹಕರು ಇದ್ದರು. ಸದರಿ ನಮ್ಮನ್ನು ನೋಡಿ ಆರೋಪಿತನು ಓಡಿ ಹೋಗಿರುತ್ತಾನೆ. ಗ್ರಾಹಕರು ಅಲ್ಲೇ ಇದ್ದರು. ಗ್ರಾಹಕರನ್ನು ವಿಚಾರಣೆ ಮಾಡಿರುತ್ತೇವೆ. ಗ್ರಾಹಕರ ಹೇಳಿಕೆಯನ್ನು ಪಡೆದುಕೊಂಡಿರುವುದಿಲ್ಲ. ಚಾಸಾಃ 1 ರವರು ಪಂಚನಾಮೆಯನ್ನು ಟೈಪ ಮಾಡಿಸಿರುತ್ತಾರೆ. ಪ್ರಿಂಟನ್ನು ಗುನ್ನೆ ಸ್ಥಳದಲ್ಲಿ ತೆಗೆದಿರುತ್ತೇವೆ. ಪ್ರಿಂಟರನ್ನು ನಾವೇ ತೆಗೆದುಕೊಂಡು ಹೋಗಿರುತ್ತೇವೆ. ನಾನು ಠಾಣೆಯಲ್ಲಿ ಹೇಳಿಕೆ ನೀಡಿರುತ್ತೇನೆ. ನಾನು ಯಾವುದೇ ದಾಳಿ ಮಾಡಿರುವುದಿಲ್ಲ ಗುನ್ನೆ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾಃ 1 ರವರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಲಯ ಯಾದಗಿರಿ.

ಸಿಸಿ ನಂ. **324/2020**

| | | |
|---|---|---|
| ಸಾಕ್ಷಿಯ ಹೆಸರುಃ | ಮಲ್ಲಪ್ಪ | ಪ್ರಾಸಾಃ 2 |
| ತಂದೆ/ಗಂಡನ ಹೆಸರುಃ | ಬಸವರಾಜ | ಚಾಸಾಃ 3 |
| ವಯಸ್ಸು ಃ | 33 ವರ್ಷ | ದಿಃ 07-03-2026 |
| ಉದ್ಯೋಗಃ | ವ್ಯಾಪಾರ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಕಣೆಕಲ್ | |

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ

ನನಗೆ ಚಾಸಾಃ 2 ರವರ ಪರಿಚಯ ಇದೆ. ನನಗೆ ಆರೋಪಿತರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನುಡಿದಿರುವುದಿಲ್ಲ. ಯಾವ ದಿನದಂದು ಏನು ಆಗಿದೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲಾತಿಯನಮ್ನು ತೋರಿಸಲಾಗಿ ಅದು ಗುನ್ನೆ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-1 ಎಂದು, ಸಾಕ್ಷಿಯ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ನಿಪಿ-1 ರಲ್ಲಿ ಏನು ಬರೆದಿರುತ್ತಾರೆ ಎಂಬುದರ ಬಗ್ಗೆ ಮಾಹಿತಿ ನನಗೆ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸರಕಾರಿ ಸಹಾಯಕ ಅಭೀಯೋಜಕರವರು ಪಾಟಿ ಸವಾಲು ಮಾಡಲು ಅನುಮತಿಯನ್ನು ಕೋರಿದ್ದು ನ್ಯಾಯಾಲಯದ ಮುಂದೆ ಇರುವ ದಾಖಲಾತಿಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

ದಿನಾಂಕ 26-03-2020 ರಂದು ನನಗೆ ಮತ್ತು ಚಾಸಾಃ 2 ರವರನ್ನು ಪೋಲಿಸರು ಜಪ್ತಿ ಪಂಚನಾಮೆ ಸಾಕ್ಷಿದಾರಾಗಿ ಕರೆಸಿರುತ್ತಾರೆ ಎಂದರೆ ಸರಿಯಲ್ಲ. ನಮ್ಮ ಸಮಕ್ಷಮದಲ್ಲಿ ನಿಪಿ-1 ರಂತೆ ಜಪ್ತಿ ಪಂಚನಾಮೆ ಜರುಗಿಸಿರುತ್ತಾರೆ ಅಂದರೆ ಸರಿಯಲ್ಲ. ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದ ಇಲ್ಲ

ಮರು ವಿಚಾರಣೆಃ ಇಲ್ಲ

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು ಯಾದಗಿರಿ